ಡಾ ಮನಮೋಹನ್ ಸಿಂಗ್
ಬೆಂಗಳೂರು ನಗರ ವಿಶ್ವವಿದ್ಯಾನಿಲಯ

Dr. Manmohan Singh
Bengaluru City University

"ಜ್ಞಾನಜ್ಯೋತಿ–ಸೆಂಟ್ರಲ್ ಕಾಲೇಜ್ ಕ್ಯಾಂಪಸ್" ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು– 560 001.
E-Mail ID: registrar@bcu.ac.in

ಸಂ:ಡಾ.ಮಸಿಂಬೆಂನವಿ/ಶೈಕ್ಷಣಿಕ/ಸಂಯೋಜನೆ–2027–28/2026–27 ದಿನಾಂಕ:26.11.2026

## ಸಂಯೋಜನೆಗಾಗಿ ಪರಿಷ್ಕೃತ ಅಧಿಸೂಚನೆ

**ವಿಷಯ:** 2027–28ನೇ ಶೈಕ್ಷಣಿಕ ಸಾಲಿನ ಸಂಯೋಜನೆಗಾಗಿ (UUCMS ಮೂಲಕ) ಅರ್ಜಿ ಸಲ್ಲಿಸಲು ಹಾಗೂ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವನ್ನು ವಿಸ್ತರಿಸುವ ಕುರಿತು.

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ: ಇಡಿ 212 ಯುಎನ್ಇ 2024 (ಭಾಗ–1), ಬೆಂಗಳೂರು, ದಿನಾಂಕ: 06.10.2026.
2. ಸಂ: ಡಾ.ಮ.ಸಿಂ.ಬೆಂ.ನವಿ/ಶೈಕ್ಷಣಿಕ/ಸಂಯೋಜನೆ–2027–28/2026–27, ದಿನಾಂಕ: 17.10.2026.
3. ಸರ್ಕಾರದ ಪತ್ರ ಸಂಖ್ಯೆ: ಇಡಿ 212 ಯುಎನ್ಇ 2024 (ಭಾಗ–1), ಬೆಂಗಳೂರು, ದಿನಾಂಕ: 21.11.2026
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:26.11.2026

****

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಸಂಯೋಜಿತ ಕಾಲೇಜುಗಳು ಹಾಗೂ ಶೈಕ್ಷಣಿಕ ಸಂಸ್ಥೆಗಳು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ, 2000ರ ಕಲಂ 59 ಮತ್ತು 62ರ ಅನ್ವಯ, 2027–28ನೇ ಶೈಕ್ಷಣಿಕ ಸಾಲಿಗೆ ವಿವಿಧ ಪ್ರಕಾರದ ಸಂಯೋಜನೆಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 21.11.2026 ಎಂದು ನಿಗದಿಪಡಿಸಲಾಗಿತ್ತು.

ಉಲ್ಲೇಖ (3)ರ ಸರ್ಕಾರದ ಪತ್ರದಲ್ಲಿ ತಿಳಿಸಿರುವಂತೆ, ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳು ಹಾಗೂ ಶೈಕ್ಷಣಿಕ ಸಂಸ್ಥೆಗಳು ಸಂಯೋಜನೆಗಾಗಿ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆಗಳು ಮತ್ತು ಸರ್ವರ್ ಸಮಸ್ಯೆಗಳು ಎದುರಾಗಿರುವ ಹಿನ್ನೆಲೆಯಲ್ಲಿ, 2027–28ನೇ ಶೈಕ್ಷಣಿಕ ಸಾಲಿನ ಸಂಯೋಜನೆಗೆ ಸಂಬಂಧಿಸಿದಂತೆ UUCMS ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಲು ಹಾಗೂ ನಿಗದಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕವನ್ನು 15.12.2026ರವರೆಗೆ ವಿಸ್ತರಿಸಲಾಗಿದೆ.

ಆದ್ದರಿಂದ, ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಸಂಯೋಜಿತ ಕಾಲೇಜುಗಳು ಹಾಗೂ ಶೈಕ್ಷಣಿಕ ಸಂಸ್ಥೆಗಳು ವಿಸ್ತರಿಸಲಾದ ಅವಧಿಯೊಳಗೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಿ, ನಿಗದಿತ ಶುಲ್ಕವನ್ನು ಪಾವತಿಸಲು ಸೂಚಿಸಲಾಗಿದೆ.

ಪು.ತಿ.ನೋ

ಹೆಚ್ಚಿನ ಮಾಹಿತಿಗಾಗಿ ಹಾಗೂ ಕೋರ್ಸುಗಳ ವಿವರಗಳನ್ನು www.bcu.ac.in ಜಾಲತಾಣದಲ್ಲಿ ಪ್ರಕಟಿಸಿರುವ ಅಧಿಸೂಚನೆಗಳಲ್ಲಿ ವೀಕ್ಷಿಸಬಹುದಾಗಿದೆ.

ಕುಲಸಚಿವರು

ಪ್ರತಿ:

1. ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560001.
3. ಮಾನ್ಯ ಕುಲಪತಿಗಳು / ಕುಲಸಚಿವರು / ಕುಲಸಚಿವರು (ಮೌಲ್ಯಮಾಪನ) / ಹಣಕಾಸು ಅಧಿಕಾರಿಗಳ ಆಪ್ತ ಕಾರ್ಯದರ್ಶಿಗಳು, ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು.
4. ಯುಯುಸಿಎಂಎಸ್ (UUCMS) ಪ್ರತಿ
5. ಕಚೇರಿ ಪ್ರತಿ / ಶಾಖಾ ರಕ್ಷಾ ಕಡತ.